# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 460
2. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 22.07.2019
4. ಉತ್ತರಿಸಬೇಕಾದ ಸಚಿವರು : ಮಾನ್ಯ ಸಹಕಾರ ಸಚಿವರು

***

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ | ಸರ್ಕಾರವು ರಾಜ್ಯ ಸಹಕಾರ ಮಾರಾಟ ಮಹಾಮಂಡಳಿ ವತಿಯಿಂದ ಖರೀದಿಸುವ ಹೆಸರುಕಾಳಿಗೆ ನೀಡುವ ಬೆಂಬಲ ಬೆಲೆ ಎಷ್ಟು; | 2018-19ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರ ಘೋಷಿಸಿದ ಎಫ್.ಎ.ಕ್ಯೂ ಗುಣಮಟ್ಟದ ಹೆಸರುಕಾಳನ್ನು ಪ್ರತಿ ಕ್ವಿಂಟಾಲ್‌ಗೆ ಕೇಂದ್ರ ಸರ್ಕಾರದ ಬೆಂಬಲ ಬೆಲೆ ರೂ.6975.00 ರಂತೆ ನಿಗಧಿಯಾಗಿರುತ್ತದೆ. |
| ಆ | ರಾಜ್ಯ ಸಹಕಾರ ಮಾರಾಟ ಮಹಾಮಂಡಳಿ ವತಿಯಿಂದ ಇಷ್ಟು ಮೆಟ್ರಿಕ್ ಟನ್ ಹೆಸರುಕಾಳು ಖರೀದಿಸುವುದಾಗಿ ತಿಳಿಸಲಾಗಿತ್ತು ಈವರೆಗೆ ಎಷ್ಟು ಮೆಟ್ರಿಕ್ ಟನ್ ಹೆಸರುಕಾಳು ಖರೀದಿಸಲಾಗಿದೆ; ಇನ್ನು ಖರೀದಿಸಲು ಎಷ್ಟು ಬಾಕಿ ಇದೆ; | ಸರ್ಕಾರದ ಆದೇಶದ ಅನ್ವಯ 28,950 ಮೆಟ್ರಿಕ್ ಟನ್ ಖರೀದಿಸಲು ಗುರಿ ನೀಡಲಾಗಿತ್ತು. 2018-19 ನೇ ಸಾಲಿಗೆ ಸರ್ಕಾರದ ಗುರಿಯಂತೆ 28,950 ಮೆಟ್ರಿಕ್ ಟನ್ ಖರೀದಿಸಲಾಗಿರುತ್ತದೆ ನಂತರ ರಾಜ್ಯ ಸರ್ಕಾರದ ಆದೇಶದ ಆನ್ವಯ ಕಲಬುರಗಿ, ಬೀದರ್, ಯಾದಗಿರಿ, ಬಾಗಲಕೋಟೆ, ಬೆಳಗಾವಿ, ಗದಗ ಮತ್ತು ಧಾರವಾಡ ಜಿಲ್ಲೆಗಳಲ್ಲಿ 2057.50 ಮೆಟ್ರಿಕ್ ಟನ್ ಹೆಸರು ಕಾಳನ್ನು ಕೇಂದ್ರ ಸರ್ಕಾರವು ನಿಗಧಿ ಪಡಿಸಿದ ದರ ಪ್ರತಿ ಕ್ವಿಂಟಾಲ್‌ಗೆ ರೂ.6975.00 ರಂತೆ ಖರೀದಿಸಲಾಗಿದೆ. ಇನ್ನು ಖರೀದಿಸಲು ಯಾವುದೇ ಬಾಕಿ ಇರುವುದಿಲ್ಲ. |
| ಇ | ರೈತರು ಬೆಳೆದ ಬೆಳೆಗಳನ್ನು ಸರ್ಕಾರವು ಖರೀದಿಸದೆ ಇರುವುದರಿಂದ ಆತ್ಮಹತ್ಯೆಗೆ ಶರಣಾದ ರೈತರ ಸಂಖ್ಯೆ ಎಷ್ಟು; | ಇಂತಹ ಪ್ರಕರಣಗಳು ಯಾವುದು ಇರುವುದಿಲ್ಲ. |
| ಈ | ರೈತರ ಸಾಲ ಮನ್ನಾಕ್ಕಿಂತ ರೈತರ ಬೆಳೆದ ಬೆಳೆಗಳನ್ನು ಖರೀದಿಸುವ ಮೂಲಕ ರೈತರನ್ನು ಉಳಿಸುವ ಯಾವ ಕಾರ್ಯಕ್ರಮಗಳನ್ನು ಸರ್ಕಾರ ಕೈಗೊಂಡಿದೆ; ಇದುವರೆಗೆ ರೈತರಿಂದ ಯಾವ ಯಾವ ಬೆಳೆಗಳನ್ನು ಬೆಂಬಲ ಬೆಲೆ ನೀಡಿ ಖರೀದಿಸಲಾಗಿದೆ; ರೈತರು ಹೆಚ್ಚುವರಿ ಬೆಳೆದ ಬೆಳೆಗಳನ್ನು ಖರೀದಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | 2019-20ನೇ ಸಾಲಿನ ಆಯ-ವ್ಯಯದಲ್ಲಿ ಕೃಷಿ ಮತ್ತು ತೋಟಗಾರಿಕಾ ಉತ್ಪನ್ನಗಳ ಬೆಲೆ ಕುಸಿತವನ್ನು ತಡೆಗಟ್ಟಲು ಈ ಕೆಳಕಂಡ ಯೋಜನೆಗಳನ್ನು ಘೋಷಿಸಿದೆ.<br>1) ರಾಜ್ಯದಲ್ಲಿ 12 ಅಧಿಸೂಚಿತ ಕೃಷಿ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆಯ ಸಂರಕ್ಷಣಾ ವ್ಯವಸ್ಥೆಯನ್ನು ಆವರ್ತಕ ನಿಧಿ ಮೂಲಕ ಒದಗಿಸಿ, "ರೈತ ಕಣಜ" ಯೋಜನೆ ಹಾಗೂ ಈರುಳ್ಳಿ, ಆಲೂಗಡ್ಡೆ ಹಾಗೂ ಟೊಮೆಟೊ ಉತ್ಪನ್ನಗಳ ಬೆಲೆ ಕುಸಿತ ಉಂಟಾದ ಸಮಯದಲ್ಲಿ, (Price Deficiency Payment Scheme) ಬೆಲೆ ಕೊರತೆ ಪಾವತಿ ಯೋಜನೆಯನ್ನು ರೂಪಿಸಿದೆ. |

...2

| | | |
|---|---|---|
| | | 2) ಹೆಸರು, ಉದ್ದು, ಸೋಯಾ, ತೊಗರಿ, ಕಡಲೆಕಾಳು, ಭತ್ತ, ರಾಗಿ, ಮೆಕ್ಕೆಜೋಳ, ಜೋಳ, ಕೊಬ್ಬರಿ, ಸುಲಿದ ತೆಂಗಿನಕಾಯಿ, ಸೂರ್ಯಕಾಂತಿ, ಶೇಂಗಾ, ಹತ್ತಿ, ಉತ್ಪನ್ನಗಳನ್ನು ಕೇಂದ್ರ ಸರ್ಕಾರದ ಅನುಮೋದನೆಯೊಂದಿಗೆ ಖರೀದಿಸಿದೆ.<br>3) ಕೃಷಿ ಮತ್ತು ತೋಟಗಾರಿಕಾ ಉತ್ಪನ್ನಗಳ ಬೆಲೆ, ಕೊಯ್ಲು ಅವಧಿಯಲ್ಲಿ ಕುಸಿತಕ್ಕೊಳಗಾದಾಗ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಶಿಫಾರಸ್ಸಿನಂತೆ, ಕೃಷಿ ಮತ್ತು ತೋಟಗಾರಿಕಾ ಬೆಲೆ ಸ್ಥಿರೀಕರಣ ಸಚಿವ ಸಂಪುಟ ಉಪಸಮಿತಿಯ ತೀರ್ಮಾನದಂತೆ, ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಕೇಂದ್ರ ಸರ್ಕಾರದ ಅನುಮೋದನೆಯೊಂದಿಗೆ ಬೆಂಬಲ ಬೆಲೆ ಯೋಜನೆಯಡಿ ಮತ್ತು ಬೆಲೆ ಕೊರತೆ ಪಾವತಿ ಯೋಜನೆಯಡಿ(PDPS) ಮತ್ತು ಮಾರುಕಟ್ಟೆ ಮಧ್ಯ ಪ್ರವೇಶ ಯೋಜನೆಯಡಿ (MIS) ಕೃಷಿ ಮತ್ತು ತೋಟಗಾರಿಕಾ ಉತ್ಪನ್ನಗಳನ್ನು ಖರೀದಿಸಲಾಗುತ್ತದೆ. |

**ಸಂಖ್ಯೆ: ಸಇ 103 ಎಂಆರ್‌ಇ 2019**

(ಬಂಡೆಪ್ಪ ಖಾಶೆಂಪೂರ)
**ಸಹಕಾರ ಸಚಿವರು.**